ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಶಾಖೆ / ವಿಷಯ : DEPARTMENT / SUBJECT: ಶಾಸಕರ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 24/9/19

## ಅಕ್ರಮ ಡಿನೋಟಿಫಿಕೇಷನ್

# ಸಿದ್ದು ವಿರುದ್ಧದ ಪ್ರಕರಣಕ್ಕೆ ಹೈಕೋರ್ಟ್ ತಡೆ

■ **ವಿಕ ಸುದ್ದಿಲೋಕ** ಬೆಂಗಳೂರು 24/9

ಅಕ್ರಮ ಡಿನೋಟಿಫಿಕೇಷನ್ ಆರೋಪ ಪ್ರಕರಣದ ಸಂಬಂಧ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ನಡೆಯುತ್ತಿರುವ ವಿಚಾರಣೆಗೆ ಹೈಕೋರ್ಟ್ ಸೋಮವಾರ ಮಧ್ಯಂತರ ತಡೆಯಾಜ್ಞೆ ನೀಡಿದೆ.



ವಿಚಾರಣೆ ರದ್ದು ಕೋರಿ ಸಿದ್ದರಾಮಯ್ಯ ಸಲ್ಲಿಸಿದ್ದ ಅರ್ಜಿ ಆಲಿಸಿದ ನ್ಯಾ. ಪಿ.ಎಸ್. ದಿನೇಶ್ ಕುಮಾರ್ ಅವರಿದ್ದ ಏಕಸದಸ್ಯಪೀಠ ವಾದ ಆಲಿಸಿ, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ವಿಚಾರಣೆಗೆ ನಾಲ್ಕು ವಾರಗಳ ಮಧ್ಯಂತರ ತಡೆ ನೀಡಿತು. ಅಲ್ಲದೇ ದೂರುದಾರ ಎನ್.ಗಂಗರಾಜುಗೆ ಆಕ್ಷೇಪಣೆ ಸಲ್ಲಿಸಲು ಸೂಚಿಸಿತು.

ಮೈಸೂರಿನ ವಿಜಯನಗರ 2ನೇ ಹಂತದ ಬಡಾವಣೆ ನಿರ್ಮಾಣಕ್ಕೆ ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಮುಡಾ) ಸ್ವಾಧೀನಪಡಿಸಿಕೊಂಡಿದ್ದ 535 ಎಕರೆ ಜಮೀನಿನಲ್ಲಿ 30 ಗುಂಟೆ ಜಮೀನು ಡಿನೋಟಿಫೈ ಮಾಡಲಾದ ಪ್ರಕರಣದಲ್ಲಿ 1997ರಲ್ಲಿ ಡಿಸಿಎಂ ಆಗಿದ್ದ ಸಿದ್ದರಾಮಯ್ಯ ಅಧಿಕಾರ ದುರುಪಯೋಗ ಮಾಡಿಕೊಂಡಿದ್ದಾರೆಂಬ ಆರೋಪ ಎದುರಿಸುತ್ತಿದ್ದಾರೆ.

ಡಿನೋಟಿಫೈ ಮಾಡಲಾದ 30 ಗುಂಟೆ ಜಮೀನು ಪೈಕಿ 10 ಗುಂಟೆಯನ್ನು ಸಿದ್ದರಾಮಯ್ಯ ಖರೀದಿಸಿ ಮಾರಾಟ ಮಾಡಿದ್ದಾರೆ ಎಂದು ಆರೋಪಿಸಿ ಗಂಗರಾಜು ಎಂಬುವರು ದೂರು ದಾಖಲಿಸಿದ್ದರು. ತನಿಖೆ ನಡೆಸಿದ್ದ ಪೊಲೀಸರು ಸಲ್ಲಿಸಿದ್ದ ಬಿ ರಿಪೋರ್ಟ್ ಪ್ರಶ್ನಿಸಿ ದೂರುದಾರ ಗಂಗರಾಜು ಕೋರ್ಟ್ ಮೊರೆ ಹೋಗಿದ್ದರು. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಸಿದ್ದರಾಮಯ್ಯನವರಿಗೆ ಸೆ.23ರಂದು ಖುದ್ದು ಹಾಜರಾಗುವಂತೆ ಸಮನ್ಸ್ ಜಾರಿಗೊಳಿಸಿತ್ತು.